





# ಆಟವಾಡಿ, ಅನ್ನ ನೀಡಿ!

ಕಂಪ್ಯೂಟರ್ (ಗಣಕ) ಮುಂದೆ ಕುಳಿತು ಆಟವಾಡುವುದು ಯುವಜನಾಂಗದ ಅತ್ಯಂತ ವ್ಯಾಪಕವಾದ ಹವ್ಯಾಸಗಳಲ್ಲೊಂದು. ಹವ್ಯಾಸವೇನು, ಅನೇಕರಿಗೆ ಇದೊಂದು ಚಟ ಎಂದೇ ಹೇಳಬಹುದು. ಸದಾಕಾಲವೂ ಒಂದಿಲ್ಲೊಂದು ಆಟ ಆಡಿಕೊಂಡು ಗಣಕದ ಮುಂದೆ ಕುಳಿತಿರುವವರೂ ಇಲ್ಲದಿಲ್ಲ.

ಈಚೆಗೆ ಬಹಳ ಸುದ್ದಿ ಮಾಡಿದ ಇಂಥ ಆಟಗಳಲ್ಲಿ ಫಾರ್ಮ್‌ವಿಲೆ ಪ್ರಮುಖವಾದದ್ದು. ಫೇಸ್‌ಬುಕ್ ಜಾಲತಾಣದಲ್ಲಿ ಲಭ್ಯವಿರುವ ಈ ಆಟ ಆಡುವವರು ಗಣಕದಲ್ಲೇ ಉತ್ತು ಬಿತ್ತು ಬೆಳೆ ತೆಗೆಯುವುದು ಸಾಧ್ಯ. ಪರಿಚಯವಾದ ಒಂದು- ಒಂದೂವರೆ ವರ್ಷಗಳ ಅವಧಿಯಲ್ಲೇ ಆರು ಕೋಟಿಗೂ ಹೆಚ್ಚು ಜನಕ್ಕೆ 'ಫಾರ್ಮಿಂಗ್' ಹುಚ್ಚು ಹತ್ತಿಸಿದ ಹಿರಿಮೆ ಈ ಆಟದ್ದು.

ಗಣಕದಲ್ಲಿ ಮಾತ್ರ ಕಾಣಿಸುವ ಬತ್ತವನ್ನು ಮೌಸ್ ಬಳಸಿ ನಾಟಿ ಮಾಡಿ, ಬೆಳೆ ತೆಗೆಯುವ ಫಾರ್ಮ್‌ವಿಲೆ ಆಟಗಾರರ ವರ್ಚುಯಲ್ ಸಂಭ್ರಮದ ನಡುವೆ, ಇಲ್ಲಿ ಇನ್ನೂ ಒಂದು ಆನ್‌ಲೈನ್ ಆಟ ಹೆಚ್ಚಿನ ಪ್ರಚಾರವಿಲ್ಲದೆ ಕುಳಿತಿದೆ. ಅದು ಹಸಿದ ಹೊಟ್ಟೆಗಳಿಗೆ ನಿಜಕ್ಕೂ ಅನ್ನ ನೀಡುತ್ತದೆ ಎಂದರೆ ನಂಬುತ್ತೀರಾ?

ಖಂಡಿತಾ ನಂಬಲೇಬೇಕು. 'ಫ್ರೀ ರೈಸ್' ಎಂಬ ಹೆಸರಿನ ಈ ಆಟ ಡಬ್ಲ್ಯುಡಬ್ಲ್ಯು ಡಬ್ಲ್ಯುಫ್ರೀರೈಸ್ ಡಾಟ್‌ಕಾಮ್ ಜಾಲತಾಣದಲ್ಲಿ ಲಭ್ಯವಿದೆ. ಇದು ತುಂಬಾ ಸುಲಭ. ಕಲೆ, ಭಾಷೆ, ರಸಾಯನಶಾಸ್ತ್ರ, ಭೂಗೋಳ, ಗಣಿತ ಮುಂತಾದವುಗಳಲ್ಲಿ ಯಾವುದಾದರೂ ಒಂದು ವಿಷಯ ಆಯ್ದುಕೊಂಡು ಆ ವಿಷಯಕ್ಕೆ ಸಂಬಂಧಪಟ್ಟ ಪ್ರಶ್ನೆಗಳನ್ನು ಉತ್ತರಿಸುತ್ತ ಹೋದರಾಯಿತು; ಸಾಮಾನ್ಯಜ್ಞಾನ ಹೆಚ್ಚಿಸಿಕೊಳ್ಳುವ ಜೊತೆಗೆ ಹಸಿದ ಹೊಟ್ಟೆಗೆ ಅನ್ನ ನೀಡಿದ ಪುಣ್ಯವೂ ನಿಮಗೆ ದೊರಕುತ್ತದೆ.

ಅದು ಹೇಗೆಂದರೆ- ಈ ಆಟದಲ್ಲಿ ನೀವು ನೀಡುವ ಪ್ರತಿಯೊಂದು ಸರಿಯುತ್ತರಕ್ಕೂ ಹತ್ತು ಕಾಳು ಅಕ್ಕಿ ಬಹುಮಾನ. ನೀವು ಎಷ್ಟು ಕಾಳು ಅಕ್ಕಿ ಗೆಲ್ಲುತ್ತೀರೋ, ಅಷ್ಟು ಅಕ್ಕಿಯನ್ನು ವಿಶ್ವದ ವಿವಿಧೆಡೆಗಳಲ್ಲಿ ಆಹಾರದ ಕೊರತೆಯಿಂದ ಬಳಲುತ್ತಿರುವ ಜನತೆಗೆ ಕೊಡುಗೆಯಾಗಿ ನೀಡಲಾಗುತ್ತದೆ.

ಪ್ರತಿಯೊಂದು ಪ್ರಶ್ನೆಯ ಕೆಳಗೂ ಪ್ರದರ್ಶಿಸಲಾಗುವ ಜಾಹೀರಾತಿನಿಂದ ಬರುವ ಆದಾಯದಿಂದ ಈ ಅಕ್ಕಿಯನ್ನು ಕೊಳ್ಳಲಾಗುತ್ತದೆ. ಆಟವಾಡುವ ಜೊತೆಗೆ ಹಣದ ರೂಪದ ದೇಣಿಗೆಯನ್ನೂ ಕೊಡುತ್ತೇವೆ ಎನ್ನುವವರಿಗೂ ಸ್ವಾಗತವಿದೆ.

ಈ ವಿಶಿಷ್ಟ ಕಲ್ಪನೆಗೆ ಜೀವ ಕೊಟ್ಟವನು ಜಾನ್ ಬ್ರೀನ್- 2007ರಲ್ಲಿ. ನಂತರ ಆತ ಅದರ ನಿರ್ವಹಣೆಯನ್ನು ವಿಶ್ವಸಂಸ್ಥೆಯ ವಿಶ್ವ ಆಹಾರ ಕಾರ್ಯಕ್ರಮಕ್ಕೆ (ವರ್ಲ್ಡ್ ಫುಡ್ ಪ್ರೋಗ್ರಾಂ) ಬಿಟ್ಟುಕೊಟ್ಟ. ಅಲ್ಲಿಂದೀಚೆಗೆ ಈ ಆಟ ಅಭೂತಪೂರ್ವ ಯಶಸ್ಸನ್ನು ಕಂಡಿದೆ, ಲಕ್ಷಾಂತರ ಬಡಜನರ ಅನ್ನದಾತನಾಗಿ ಬೆಳೆದಿದೆ.

ಒಂದು ಉತ್ತರಕ್ಕೆ ಹತ್ತು ಕಾಳು ಅಕ್ಕಿ ಬಹಳ ಕಡಿಮೆ ಅನ್ನಿಸಬಹುದು; ಆದರೆ ಸಾವಿರಾರು ಜನ ಈ ಆಟ ಆಡುತ್ತಿರುವಾಗ ದಿನಕ್ಕೆ ಕಡಿಮೆಯೆಂದರೂ ಒಂದು ಕೋಟಿ ಕಾಳುಗಳು ಸಂಗ್ರಹವಾಗುತ್ತವೆ! ಒಂದು ಗ್ರಾಂ ಅಕ್ಕಿಯಲ್ಲಿ 50 ಕಾಳುಗಳಿವೆ ಎಂದುಕೊಂಡರೆ ಒಟ್ಟು ಇನ್ನೂರು ಕೆ.ಜಿ ಅಕ್ಕಿ!

ಈವರೆಗೆ ಈ ಆಟದ ಮೂಲಕ ಎಂಟು ಸಾವಿರ ಕೋಟಿ ಅಕ್ಕಿಕಾಳುಗಳನ್ನು ಸಂಗ್ರಹಿಸಿ ತರಿಸಲಾಗಿದೆ. ನೇಪಾಳ, ಕಾಂಬೋಡಿಯಾ, ಉಗಾಂಡಾ, ಬಾಂಗ್ಲಾದೇಶ, ಮ್ಯಾನ್ಮಾರ್ ಸೇರಿದಂತೆ ಅನೇಕ ರಾಷ್ಟ್ರಗಳಲ್ಲಿ ಈ ಅಕ್ಕಿಯ ವಿತರಣೆ ನಡೆಯುತ್ತಿದೆ.

ಫ್ರೀರೈಸ್ ಡಾಟ್ ಕಾಮ್ ತಾಣವನ್ನು ನಡೆಸುತ್ತಿರುವ, ಹಾಗೂ ಈ ಮೂಲಕ ಸಂಗ್ರಹವಾಗುವ ಅಕ್ಕಿಯ ವಿತರಣೆಯ ಜವಾಬ್ದಾರಿ ಹೊತ್ತಿರುವ ವಿಶ್ವ ಆಹಾರ ಕಾರ್ಯಕ್ರಮದ ಬಗೆಗೆ ಹೆಚ್ಚಿನ ಮಾಹಿತಿಗಾಗಿ ಡಬ್ಲ್ಯುಡಬ್ಲ್ಯುಡಬ್ಲ್ಯುಫ್ರೀರೈಸ್ ಡಾಟ್‌ಕಾಮ್ ತಾಣಕ್ಕೆ ಭೇಟಿ ಕೊಡಬಹುದು.

★ ಟಿಜಿಎಸ್




